ANANDA Bhaskar

PRGI No: TNMUL/25/A1387 www.anandabhaskar.com

ಸಂಪುಟ: 02 ಸಂಚಿಕೆ: 57 10.09.2026 ಗುರುವಾರ FREE EPAPER



ಕುರ್ಚಿ ವಿಚಾರಕ್ಕೆ ಜಗಳ: ವಿದ್ಯಾರ್ಥಿನಿಗೆ ಹಲ್ಲೆ, ಪ್ರಜ್ಞೆ ತಪ್ಪಿ ಬಿದ್ದ ಯುವತಿ

ಕೆಜಿಎಫ್, ಸೆ.9 :
ತರಗತಿಯಲ್ಲಿ ಕುರ್ಚಿ ಮುಂದಕ್ಕೆ ಸರಿಸುವ ವಿಚಾರಕ್ಕೆ ಆರಂಭವಾದ ವಿದ್ಯಾರ್ಥಿಗಳ ನಡುವಿನ ವಾಗ್ವಾದ ಹಿಂಸಾಚಾರಕ್ಕೆ ತಿರುಗಿ, ವಿದ್ಯಾರ್ಥಿನಿಯೊಬ್ಬರ ಮೇಲೆ ಸಹಪಾಠಿ ಹಲ್ಲೆ ನಡೆಸಿದ ಘಟನೆ ಕೆಜಿಎಫ್‌ನ ಮಹಾವೀರ್ ಜೈನ್ ಕಾಲೇಜಿನಲ್ಲಿ ನಡೆದಿದೆ. ಹಲ್ಲೆಯ ದೃಶ್ಯ ತರಗತಿಯ ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿದೆ.
ಕುರ್ಚಿ ವಿಚಾರವಾಗಿ ವಿದ್ಯಾರ್ಥಿಗಳ ನಡುವೆ ಮಾತಿನ ಚಕಮಕಿ ನಡೆದಿದ್ದು, ಈ ವೇಳೆ ಕೆಲ ಸಹಪಾಠಿಗಳು ವಿದ್ಯಾರ್ಥಿನಿಯನ್ನು ಅಪಹಾಸ್ಯ ಮಾಡಿದ್ದಾರೆ ಎನ್ನಲಾಗಿದೆ. ಇದರಿಂದ ಆಕ್ರೋಶಗೊಂಡ ವಿದ್ಯಾರ್ಥಿನಿ ವಿದ್ಯಾರ್ಥಿಯೊಬ್ಬನಿಗೆ ಕಪಾಳಮೋಕ್ಷ ಮಾಡಿದ್ದಾಳೆ. ಬಳಿಕ ಮತ್ತೊಬ್ಬ ವಿದ್ಯಾರ್ಥಿ ಆಕೆಯ ಮೇಲೆ ಎರಡು–ಮೂರು ಬಾರಿ ಬಲವಾಗಿ ಹಲ್ಲೆ ನಡೆಸಿದ್ದಾನೆ ಎಂದು ವರದಿಯಾಗಿದೆ.
ಹಲ್ಲೆಯಿಂದ ವಿದ್ಯಾರ್ಥಿನಿ ತರಗತಿಯಲ್ಲೇ ಪ್ರಜ್ಞೆ ತಪ್ಪಿ ನೆಲಕ್ಕೆ ಕುಸಿದು ಬಿದ್ದಿದ್ದಾಳೆ. ತಕ್ಷಣ ಇತರ ವಿದ್ಯಾರ್ಥಿಗಳು ಮಧ್ಯಪ್ರವೇಶಿಸಿ ಆಕೆಯ ನೆರವಿಗೆ ಧಾವಿಸಿದ್ದು, ಗಾಯಗೊಂಡ ವಿದ್ಯಾರ್ಥಿನಿಯನ್ನು ಕೆಜಿಎಫ್‌ನ ಸರ್ಕಾರಿ ಆಸ್ಪತ್ರೆಗೆ ಕರೆದೊಯ್ದು ಚಿಕಿತ್ಸೆ ಕೊಡಿಸಲಾಗಿದೆ. ಘಟನೆ ಕುರಿತು ದೂರು ದಾಖಲಾದ ಹಿನ್ನೆಲೆಯಲ್ಲಿ ರಾಬರ್ಟ್‌ಸನ್‌ಪೇಟೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ಆರಂಭಿಸಿದ್ದಾರೆ. ತರಗತಿಯ ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲಿಸುತ್ತಿರುವ ಪೊಲೀಸರು, ಘಟನೆಯ ಸಂಪೂರ್ಣ ಹಿನ್ನೆಲೆ ಹಾಗೂ ಹಲ್ಲೆಯಲ್ಲಿ ಭಾಗಿಯಾಗಿರುವ ವಿದ್ಯಾರ್ಥಿಗಳ ಪಾತ್ರದ ಕುರಿತು ಮಾಹಿತಿ ಕಲೆಹಾಕುತ್ತಿದ್ದಾರೆ.
ಸಣ್ಣಪುಟ್ಟ ವಿಚಾರಗಳಿಗೆ ವಿದ್ಯಾರ್ಥಿಗಳ ನಡುವೆ ವಾಗ್ವಾದ ನಡೆದು ದೈಹಿಕ ಹಲ್ಲೆಗೆ ತಿರುಗಿರುವ ಘಟನೆ ಕಾಲೇಜು ಆವರಣಗಳಲ್ಲಿನ ವಿದ್ಯಾರ್ಥಿಗಳ ಸುರಕ್ಷತೆ ಕುರಿತು ಆತಂಕ ಮೂಡಿಸಿದೆ.

ಭವಿಷ್ಯದ ಬಾಹ್ಯಾಕಾಶ ಯಾನಕ್ಕೆ ಅಂತಾರಾಷ್ಟ್ರೀಯ ಸಹಕಾರ ಅಗತ್ಯ: ಸುನಿತಾ ವಿಲಿಯಮ್ಸ್

ಬೆಂಗಳೂರು, ಸೆ.9 :
ಮಾನವ ಬಾಹ್ಯಾಕಾಶ ಯಾನದ ಭವಿಷ್ಯವನ್ನು ಯಶಸ್ವಿಗೊಳಿಸಲು ದೇಶಗಳ ನಡುವಿನ ಹೆಚ್ಚಿನ ಸಹಕಾರ ಅಗತ್ಯವಿದೆ ಎಂದು ಖ್ಯಾತ ಗಗನಯಾತ್ರಿ ಸುನಿತಾ ವಿಲಿಯಮ್ಸ್ ಹೇಳಿದ್ದಾರೆ. ಬೆಂಗಳೂರಿನಲ್ಲಿ ನಡೆಯುತ್ತಿರುವ 9ನೇ ಬೆಂಗಳೂರು ಬಾಹ್ಯಾಕಾಶ ಪ್ರದರ್ಶನದಲ್ಲಿ 'ದಿ ನೆಕ್ಸ್ಟ್ ಚಾಪ್ಟರ್ ಆಫ್ ಸ್ಪೇಸ್: ಎ ಕಾನ್ವರ್ಸೇಷನ್ ಆನ್ ಎಕ್ಸ್‌ಪ್ಲೋರೇಷನ್, ಸೈನ್ಸ್ ಆ್ಯಂಡ್ ಇನ್ನೋವೇಶನ್' ಸಂವಾದದಲ್ಲಿ ಅವರು ಮಾತನಾಡಿದರು.
ಚಂದ್ರನತ್ತ ಮತ್ತೆ ಮಾನವರು ತೆರಳಲಿದ್ದು, ಮುಂದಿನ ದಿನಗಳಲ್ಲಿ ಇನ್ನಷ್ಟು ದೂರದ ಬಾಹ್ಯಾಕಾಶ ಪ್ರದೇಶಗಳನ್ನು ಅನ್ವೇಷಿಸಲಿದ್ದಾರೆ. ಈ ಪ್ರಯತ್ನ ಒಂದು ದೇಶದ ಸಾಧನೆಯಾಗದೆ, ಮಾನವಕುಲದ ಸಾಮೂಹಿಕ ಪ್ರಯತ್ನವಾಗಬೇಕು ಎಂದು ವಿಲಿಯಮ್ಸ್ ಅಭಿಪ್ರಾಯಪಟ್ಟರು. ವಿವಿಧ ದೇಶಗಳು ಸಮಸ್ಯೆಗಳನ್ನು ಹೇಗೆ ಪರಿಹರಿಸುತ್ತವೆ ಎಂಬುದನ್ನು ಪರಸ್ಪರ ಕಲಿಯುವುದರಿಂದ ಭವಿಷ್ಯದ ಬಾಹ್ಯಾಕಾಶ ಯೋಜನೆಗಳಿಗೆ ಹೆಚ್ಚಿನ ಪ್ರಯೋಜನವಾಗಲಿದೆ ಎಂದರು.
ಅಂತರರಾಷ್ಟ್ರೀಯ ಸಹಕಾರದಿಂದ ಬಾಹ್ಯಾಕಾಶ ನಿಲ್ದಾಣಗಳ ವಿನ್ಯಾಸ, ಬಾಹ್ಯಾಕಾಶ ಉಡುಪು, ವೈಜ್ಞಾನಿಕ ಪ್ರಯೋಗಗಳು ಹಾಗೂ ತಂತ್ರಜ್ಞಾನ ಅಭಿವೃದ್ಧಿಯಲ್ಲಿ ಹೊಸ ಅವಕಾಶಗಳು ಸೃಷ್ಟಿಯಾಗುತ್ತವೆ. ಭವಿಷ್ಯದ ದೀರ್ಘಾವಧಿಯ ಬಾಹ್ಯಾಕಾಶ ಯಾನಗಳಲ್ಲಿ ಭೂಮಿಯ ಮೇಲಿನ ನಿಯಂತ್ರಣ ಕೇಂದ್ರಗಳ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡಬೇಕಾಗುತ್ತದೆ ಎಂದು ಅವರು ಹೇಳಿದರು. ಪ್ರಸ್ತುತ ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿ ಗಗನಯಾತ್ರಿಗಳು ಯಾವುದೇ ಸಮಸ್ಯೆ ಎದುರಾದಾಗ ಭೂಮಿಯಲ್ಲಿರುವ ತಂಡಗಳ ಸಹಾಯ ಪಡೆಯುತ್ತಾರೆ. ಆದರೆ ಭೂಮಿಯಿಂದ ಬಹುದೂರ ಪ್ರಯಾಣಿಸುವ ಸಂದರ್ಭದಲ್ಲಿ ಸಂವಹನದಲ್ಲಿ ವಿಳಂಬ ಉಂಟಾಗಬಹುದು. ಹೀಗಾಗಿ ಮುಂದಿನ ಬಾಹ್ಯಾಕಾಶ ನಿಲ್ದಾಣಗಳಲ್ಲಿ ಅಗತ್ಯ ಮಾಹಿತಿಯ ಸಂಗ್ರಹ, ಸಮಸ್ಯೆ ಪರಿಹರಿಸುವ ವ್ಯವಸ್ಥೆ ಹಾಗೂ ಸ್ವಯಂಚಾಲಿತ ತಂತ್ರಜ್ಞಾನಗಳು ಇರಬೇಕು ಎಂದು ವಿಲಿಯಮ್ಸ್ ವಿವರಿಸಿದರು.

ಸತೀಶ್ ಜಾರಕಿಹೊಳಿ ವಿರುದ್ಧ ಈಡಿ ದಾಳಿ ರಾಜಕೀಯ ಪ್ರೇರಿತ: ಸಿಎಂ ಡಿ.ಕೆ.ಶಿವಕುಮಾರ್

ಬೆಂಗಳೂರು, ಸೆ.8 :
ಸಚಿವ ಸತೀಶ್ ಜಾರಕಿಹೊಳಿ ಹಾಗೂ ಅವರ ಕುಟುಂಬಕ್ಕೆ ಸಂಬಂಧಿಸಿದ ಸ್ಥಳಗಳ ಮೇಲೆ ಜಾರಿ ನಿರ್ದೇಶನಾಲಯ (ಈಡಿ) ನಡೆಸುತ್ತಿರುವ ದಾಳಿ ರಾಜಕೀಯ ಪ್ರೇರಿತವಾಗಿದ್ದು, ಕೇಂದ್ರದ ಬಿಜೆಪಿ ಸರ್ಕಾರ ತನಿಖಾ ಸಂಸ್ಥೆಗಳನ್ನು ರಾಜಕೀಯ ಉದ್ದೇಶಕ್ಕಾಗಿ ದುರ್ಬಳಕೆ ಮಾಡಿಕೊಳ್ಳುತ್ತಿದೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಆರೋಪಿಸಿದ್ದಾರೆ. ನಗರದಲ್ಲಿ ಮಂಗಳವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ನಾಯಕರನ್ನು ಗುರಿಯಾಗಿಸಿಕೊಂಡು ಕೇಂದ್ರ ತನಿಖಾ ಸಂಸ್ಥೆಗಳ ಮೂಲಕ ಒತ್ತಡ ಹೇರುವ ಪ್ರಯತ್ನ ನಡೆಯುತ್ತಿದೆ ಎಂದು ದೂರಿದರು. ಈ ರೀತಿಯ ಕ್ರಮಗಳಿಗೆ ಕಾಂಗ್ರೆಸ್ ಸರ್ಕಾರ ಹಾಗೂ ಪಕ್ಷದ ನಾಯಕರು ಹೆದರುವುದಿಲ್ಲ. ತನಿಖಾ ಸಂಸ್ಥೆಗಳ ಕ್ರಮವನ್ನು ಕಾನೂನುಬದ್ಧವಾಗಿ ಎದುರಿಸಲಾಗುವುದು ಎಂದು ಸ್ಪಷ್ಟಪಡಿಸಿದರು.
ಸತೀಶ್ ಜಾರಕಿಹೊಳಿ ಅವರು ಪ್ರಾಮಾಣಿಕವಾಗಿ ರಾಜಕೀಯ ಮತ್ತು ಸಾರ್ವಜನಿಕ ಸೇವೆಯಲ್ಲಿ ತೊಡಗಿಸಿಕೊಂಡಿರುವ ನಾಯಕ. ಅವರ ವಿರುದ್ಧ ನಡೆಯುತ್ತಿರುವ ದಾಳಿ ಸೇಡಿನ ರಾಜಕಾರಣದ ಭಾಗವಾಗಿದೆ ಎಂದು ಶಿವಕುಮಾರ್ ಹೇಳಿದರು. ಕಾಂಗ್ರೆಸ್ ಸರ್ಕಾರವನ್ನು ಅಸ್ಥಿರಗೊಳಿಸಲು ವಿವಿಧ ರೀತಿಯ ಪ್ರಯತ್ನಗಳು ನಡೆಯುತ್ತಿವೆ. ಆದರೆ ಇಂತಹ ಒತ್ತಡಗಳಿಂದ ಸರ್ಕಾರದ ಕಾರ್ಯವೈಖರಿಯಲ್ಲಿ ಯಾವುದೇ ಬದಲಾವಣೆ ಆಗುವುದಿಲ್ಲ ಎಂದರು.

ಕೇಂದ್ರ ತನಿಖಾ ಸಂಸ್ಥೆಗಳ ದಾಳಿಗಳ ಕುರಿತು ಈಗಾಗಲೇ ಪಕ್ಷದ ಶಾಸಕರು ಹಾಗೂ ಸಚಿವರಿಗೆ ಎಚ್ಚರಿಕೆ ನೀಡಲಾಗಿದೆ. ರಾಜಕೀಯವಾಗಿ ಎದುರಾಗಬಹುದಾದ ಸವಾಲುಗಳನ್ನು ಕಾನೂನು ಮತ್ತು ಸಂವಿಧಾನದ ಚೌಕಟ್ಟಿನಲ್ಲಿಯೇ ಎದುರಿಸುವಂತೆ ಎಲ್ಲರಿಗೂ ತಿಳಿಸಲಾಗಿದೆ ಎಂದು ಮುಖ್ಯಮಂತ್ರಿ ಹೇಳಿದರು.

ಈಡಿ ದಾಳಿಯ ಹಿನ್ನೆಲೆಯಲ್ಲಿ ಕಾಂಗ್ರೆಸ್ ಹೈಕಮಾಂಡ್‌ನೊಂದಿಗೆ ಚರ್ಚಿಸಿ ಮುಂದಿನ ಕಾನೂನು ಹೋರಾಟದ ರೂಪುರೇಷೆಗಳನ್ನು ಅಂತಿಮಗೊಳಿಸಲಾಗುವುದು. ಅಗತ್ಯವಿದ್ದರೆ ನ್ಯಾಯಾಲಯದ ಮೊರೆ ಹೋಗಿ ತನಿಖಾ ಸಂಸ್ಥೆಗಳ ಕ್ರಮವನ್ನು ಪ್ರಶ್ನಿಸಲಾಗುವುದು ಎಂದು ಅವರು ತಿಳಿಸಿದರು.

ತನಿಖಾ ಸಂಸ್ಥೆಗಳ ಕಾರ್ಯವೈಖರಿ ಕುರಿತು ಪ್ರತಿಕ್ರಿಯಿಸಿದ ಶಿವಕುಮಾರ್, ಜಾರಿ ನಿರ್ದೇಶನಾಲಯ, ಆದಾಯ ತೆರಿಗೆ ಇಲಾಖೆ, ಸಿಬಿಐ ಸೇರಿದಂತೆ ಕೇಂದ್ರದ ತನಿಖಾ ಸಂಸ್ಥೆಗಳು ಯಾವುದೇ ರಾಜಕೀಯ ಪಕ್ಷದ ಪರವಾಗಿ ಅಥವಾ ವಿರುದ್ಧವಾಗಿ ಕಾರ್ಯನಿರ್ವಹಿಸಬಾರದು ಎಂದು ಹೇಳಿದರು. ಸಂಸ್ಥೆಗಳು ಸ್ವತಂತ್ರವಾಗಿ ಹಾಗೂ ನಿಷ್ಪಕ್ಷಪಾತವಾಗಿ ಕೆಲಸ ಮಾಡಿದಾಗ ಮಾತ್ರ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಜನರ ವಿಶ್ವಾಸ ಉಳಿಯುತ್ತದೆ ಎಂದರು. ಬಿಜೆಪಿ ನಾಯಕರು ಮಾಡುತ್ತಿರುವ ಆರೋಪಗಳಿಗೆ ಪ್ರತಿಕ್ರಿಯಿಸಿದ ಅವರು, ಆರೋಪಗಳು ಸತ್ಯವಾಗಿದ್ದರೆ ಕಾನೂನು ಪ್ರಕ್ರಿಯೆಯ ಮೂಲಕವೇ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಲಿ. ಆದರೆ ರಾಜಕೀಯ ನಾಯಕರನ್ನು ಗುರಿಯಾಗಿಸಿಕೊಂಡು ತನಿಖಾ ಸಂಸ್ಥೆಗಳನ್ನು ಬಳಸಿಕೊಳ್ಳುವುದು ಸರಿಯಲ್ಲ ಎಂದು ಹೇಳಿದರು.
ಈಡಿ ದಾಳಿಯ ಹಿಂದೆ ಯಾವುದೇ ರಾಜಕೀಯ ಉದ್ದೇಶವಿಲ್ಲ ಎಂದು ಬಿಜೆಪಿ ಹೇಳಿದರೆ, ಕಾಂಗ್ರೆಸ್ ನಾಯಕರು ಮಾತ್ರ ಅದನ್ನು ರಾಜಕೀಯ ಪ್ರತೀಕಾರದ ಕ್ರಮವೆಂದು ಆರೋಪಿಸುತ್ತಿದ್ದಾರೆ. ಇದರಿಂದ ರಾಜ್ಯ ರಾಜಕೀಯದಲ್ಲಿ ಮತ್ತೆ ಆಡಳಿತಾರೂಢ ಕಾಂಗ್ರೆಸ್ ಮತ್ತು ಬಿಜೆಪಿ ನಡುವೆ ವಾಕ್ಸಮರ ತೀವ್ರಗೊಳ್ಳುವ ಸಾಧ್ಯತೆ ಇದೆ.
ಸರ್ಕಾರದ ವಿರುದ್ಧ ಒತ್ತಡ ಹೇರುವ ಯಾವುದೇ ಪ್ರಯತ್ನಕ್ಕೂ ಕಾಂಗ್ರೆಸ್ ಜಗ್ಗುವುದಿಲ್ಲ. ಜನರ ಪರವಾಗಿ ಸರ್ಕಾರ ತನ್ನ ಕೆಲಸವನ್ನು ಮುಂದುವರಿಸಲಿದೆ. ತನಿಖಾ ಸಂಸ್ಥೆಗಳ ಕ್ರಮಕ್ಕೆ ಸಂಬಂಧಿಸಿದಂತೆ ಕಾನೂನು ಪ್ರಕ್ರಿಯೆ ನಡೆಯಲಿ, ಆದರೆ ಅವುಗಳನ್ನು ರಾಜಕೀಯ ಅಸ್ತ್ರವನ್ನಾಗಿ ಬಳಸಬಾರದು ಎಂಬುದು ಕಾಂಗ್ರೆಸ್‌ನ ಸ್ಪಷ್ಟ ನಿಲುವು ಎಂದು ಡಿ.ಕೆ. ಶಿವಕುಮಾರ್ ಹೇಳಿದರು.

ಎಪಿಎಂಸಿ ಭೇಟಿ ಶ್ಲಾಘಿಸಿದ ಹೈಕೋರ್ಟ್

ಬೆಂಗಳೂರು, ಸೆ. 9 :
ಯಶವಂತಪುರ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗೆ (ಎಪಿಎಂಸಿ) ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ದಿಢೀರ್ ಭೇಟಿ ನೀಡಿ ರೈತರು, ಕಾರ್ಮಿಕರು ಹಾಗೂ ವರ್ತಕರ ಸಮಸ್ಯೆಗಳನ್ನು ನೇರವಾಗಿ ಆಲಿಸಿರುವ ಕ್ರಮವನ್ನು ಕರ್ನಾಟಕ ಹೈಕೋರ್ಟ್ ಶ್ಲಾಘಿಸಿದೆ. ಮಾರುಕಟ್ಟೆ ಕಾರ್ಮಿಕರಿಗೆ ಕನಿಷ್ಠ ವೇತನ ದೊರೆಯುವಂತೆ ನೋಡಿಕೊಳ್ಳುವ ಅಗತ್ಯವನ್ನೂ ನ್ಯಾಯಾಲಯ ಒತ್ತಿ ಹೇಳಿದೆ.
ಎಪಿಎಂಸಿಗಳಲ್ಲಿ ಕಾರ್ಮಿಕರು ಎದುರಿಸುತ್ತಿರುವ ಸಮಸ್ಯೆಗಳು, ಕೆಲಸದ ಪರಿಸ್ಥಿತಿ ಹಾಗೂ ಅವರಿಗೆ ದೊರೆಯುತ್ತಿರುವ ವೇತನದ ಕುರಿತು ವಿಚಾರಣೆ ವೇಳೆ ನ್ಯಾಯಾಲಯದಲ್ಲಿ ಚರ್ಚೆ ನಡೆಯಿತು. ಕಾರ್ಮಿಕರ ಹಕ್ಕುಗಳನ್ನು ರಕ್ಷಿಸುವುದು ಹಾಗೂ ಕಾನೂನುಬದ್ಧ ಕನಿಷ್ಠ ವೇತನವನ್ನು ಖಾತರಿಪಡಿಸುವುದು ಸರ್ಕಾರದ ಜವಾಬ್ದಾರಿ ಎಂದು ನ್ಯಾಯಾಲಯ ತಿಳಿಸಿದೆ.
ಇತ್ತೀಚೆಗೆ ಯಶವಂತಪುರ ಎಪಿಎಂಸಿಗೆ ಭೇಟಿ ನೀಡಿದ್ದ ಮುಖ್ಯಮಂತ್ರಿ ರೈತರೊಂದಿಗೆ ಸಂವಾದ ನಡೆಸಿ, ಉತ್ಪನ್ನಗಳ ತೂಕ, ಕಮಿಷನ್, ಬೆಳೆ ವಿಮೆ ಹಾಗೂ ಮಾರುಕಟ್ಟೆಯಲ್ಲಿನ ಇತರ ಸಮಸ್ಯೆಗಳ ಬಗ್ಗೆ ಮಾಹಿತಿ ಪಡೆದಿದ್ದರು. ಈ ವೇಳೆ ಮಾರುಕಟ್ಟೆಯಲ್ಲಿ ಬಾಲಕಾರ್ಮಿಕರನ್ನು ಬಳಸುತ್ತಿರುವ ಬಗ್ಗೆ ಮಾಹಿತಿ ದೊರೆತ ಹಿನ್ನೆಲೆಯಲ್ಲಿ ಅಧಿಕಾರಿಗಳಿಗೆ ತಕ್ಷಣ ಕ್ರಮ ಕೈಗೊಳ್ಳುವಂತೆ ಸೂಚಿಸಿದ್ದರು.

ಮುಖ್ಯಮಂತ್ರಿಯವರ ಸೂಚನೆಯ ಬಳಿಕ ನಡೆಸಿದ ಕಾರ್ಯಾಚರಣೆಯಲ್ಲಿ ಯಶವಂತಪುರ ಎಪಿಎಂಸಿ ಮಾರುಕಟ್ಟೆಯಲ್ಲಿ ಕೆಲಸ ಮಾಡುತ್ತಿದ್ದ 19 ಅಪ್ರಾಪ್ತರನ್ನು ಅಧಿಕಾರಿಗಳು ರಕ್ಷಿಸಿದ್ದಾರೆ. ಬಾಲಕಾರ್ಮಿಕರನ್ನು ನೇಮಿಸಿಕೊಂಡ ಆರೋಪದಲ್ಲಿ ಪ್ರಕರಣಗಳನ್ನೂ ದಾಖಲಿಸಲಾಗಿದೆ.
ಮಾರುಕಟ್ಟೆಗಳಲ್ಲಿ ಕಾರ್ಮಿಕರ ಸುರಕ್ಷತೆ, ವೇತನ ಹಾಗೂ ಮೂಲಸೌಕರ್ಯಗಳ ಬಗ್ಗೆ ಸರ್ಕಾರ ನಿರಂತರ ನಿಗಾ ವಹಿಸಬೇಕು. ರೈತರು ಮತ್ತು ಕಾರ್ಮಿಕರ ಸಮಸ್ಯೆಗಳನ್ನು ಸ್ಥಳದಲ್ಲೇ ಆಲಿಸಿ ಪರಿಹಾರ ಕಂಡುಕೊಳ್ಳುವ ಇಂತಹ ನೇರ ಪರಿಶೀಲನೆಗಳು ಆಡಳಿತ ವ್ಯವಸ್ಥೆಗೆ ಸಹಕಾರಿಯಾಗಲಿವೆ ಎಂದು ಹೈಕೋರ್ಟ್ ಅಭಿಪ್ರಾಯಪಟ್ಟಿದೆ.
ಕಾರ್ಮಿಕರಿಗೆ ನ್ಯಾಯಯುತ ವೇತನ ಮತ್ತು ಉತ್ತಮ ಕೆಲಸದ ವಾತಾವರಣ ಕಲ್ಪಿಸುವುದರ ಜೊತೆಗೆ ಬಾಲಕಾರ್ಮಿಕ ಪದ್ಧತಿಗೆ ಸಂಪೂರ್ಣ ಕಡಿವಾಣ ಹಾಕಲು ಪರಿಣಾಮಕಾರಿ ಕ್ರಮ ಕೈಗೊಳ್ಳಬೇಕೆಂಬ ಸಂದೇಶವನ್ನು ಈ ವಿಚಾರಣೆ ನೀಡಿದೆ.

ಬಂಡಾಯ ಎದ್ದು ಲಿಂಗಾಯತ ಧರ್ಮ ಸ್ಥಾಪನೆ ಮಾಡಿದ ಬಸವಣ್ಣ

ಮಂಗಳೂರು, ಸೆ. 9 :
ಜಗಜ್ಯೋತಿ ಬಸವಣ್ಣನವರು ಹಿಂದೂ ಧರ್ಮದ ವಿರುದ್ಧ ಬಂಡಾಯ ಎದ್ದು ಲಿಂಗಾಯತ ಧರ್ಮವನ್ನು ಸ್ಥಾಪನೆ ಮಾಡಿದ್ರು. ಗೌತಮ ಬುದ್ಧರು ಹಿಂದೂ ಧರ್ಮದ ನ್ಯೂನತೆ ಸರಿ ಮಾಡಲು ಬೌದ್ಧ ಧರ್ಮ ಸ್ಥಾಪನೆ ಮಾಡಿದ್ರು ಎಂದು ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಹೇಳಿದರು.
ಪುರಭವನದಲ್ಲಿ ಅಖಿಲ ಭಾರತ ಬಿಲ್ಲವರ ಯೂನಿಯನ್ ಹಾಗೂ ನಾರಾಯಣ ಗುರು ವಿದ್ಯಾ ಸಂಸ್ಥೆಗಳ ಆಶ್ರಯದಲ್ಲಿ ನಡೆದ ಶ್ರೀ ನಾರಾಯಣಗುರು 172ನೇ ಜನ್ಮ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.
ಬ್ರಹ್ಮಶ್ರೀ ನಾರಾಯಣ ಗುರುಗಳು ಹಿಂದೂ ಧರ್ಮದಲ್ಲಿದ್ದುಕೊಂಡೆ ಸುಧಾರಣೆ ಮಾಡಿದರು. ಶತಮಾನಗಳ ಕಾಲ

ದೇವಸ್ಥಾನದ ಪ್ರವೇಶ ಮಾತ್ರವಲ್ಲ, ದೇವಸ್ಥಾನದ ಸುತ್ತಮುತ್ತಲೂ ಓಡಾಡಲು ಶೂದ್ರರಿಗೆ ಅವಕಾಶವೇ ಇರಲಿಲ್ಲ. ಅದಕ್ಕಾಗಿ ನಾರಾಯಣಗುರುಗಳು ಶೂದ್ರ ಶಿವನ ದೇವಸ್ಥಾನವನ್ನೇ ಸ್ಥಾಪನೆ ಮಾಡಿದ್ರು. ಈ ಹಿಂದೆ ನಮಗೆ ದೇವಸ್ಥಾನಕ್ಕೆ ಅನುಮತಿ ಕೊಡದವರನ್ನ ಕಾಪಾಡಲು ನಮ್ಮ ಶೂದ್ರರೇ ಹೋಗುತ್ತಿದ್ದಾರೆ. ಅತೀ ಹೆಚ್ಚು ಧರ್ಮ ದ್ವೇಷಕ್ಕೆ ಬಲಿಯಾಗುತ್ತಿರುವವರು ನಾರಾಯಣ ಗುರುಗಳ ಅನುಯಾಯಿಗಳೇ ಎಂಬುದು ವಿಷಾದನೀಯ.
ಪತ್ರಕರ್ತೆ ಗೌರಿ ಲಂಕೇಶ ಅವರನ್ನು ಕೊಂದಿದ್ದು ನಮ್ಮ ಬಿಲ್ಲವ ಸಮಾಜದವನು. ನಮಗೆ ಯಾಕೆ ಬೇಕಿತ್ತು ಆ ಹೆಣ್ಣು ಮಗಳನ್ನ ಕೊಲೆ ಮಾಡೋದು. ಹಿಂದುಳಿದವರ ಮಕ್ಕಳು ಧರ್ಮದ ವಿಷವರ್ತುಲದಲ್ಲಿ ಬಿದ್ದಿದ್ದಾರೆ. ಕೋಮುವಾದದ ಅಮಲಿನಲ್ಲಿ, ಕೊಲೆ ಕೇಸುಗಳಲ್ಲಿ ಜೈಲು ಸೇರುತ್ತಿದ್ದಾರೆ. ಇದರಿಂದ ನಮ್ಮ ಹಿಂದುಳಿದವರ ಮಕ್ಕಳನ್ನು ರಕ್ಷಿಸಬೇಕಿದೆ.
ನಾನು 25 ವರ್ಷಗಳ ರಾಜಕೀಯವನ್ನ ನಾರಾಯಣ ಗುರುಗಳ ಆದರ್ಶವನ್ನು ಪಾಲಿಸುತ್ತಾ ನಡೆಸಿದ್ದೇನೆ. ಜಾತಿ, ಬಂಡವಾಳಶಾಹಿ ವ್ಯವಸ್ಥೆಯಲ್ಲಿ ರಾಜಕಾರಣ ಮಾಡಿದವನಲ್ಲ. ಗುರುಗಳ ಚಿಂತನೆ, ಮಾರ್ಗದರ್ಶನದಲ್ಲಿ ಸಾರ್ವಜನಿಕ ಜೀವನದಲ್ಲಿ ಬದುಕಲು ನಾವೆಲ್ಲ ಪ್ರಯತ್ನಿಸಬೇಕು.
ನಮ್ಮ ಮುಂದಿನ ಪೀಳಿಗೆಗೆ ನಾರಾಯಣ ಗುರುಗಳ ಬದುಕು, ಚಿಂತನೆ ಹಾಗೂ ಅಧ್ಯಯನ ಮುಖ್ಯ ಎಂದರು.

ಬೀದರ್ ನಲ್ಲಿ ಜಾನಕಿ ಅಮ್ಮ ನವರಿಗೆ ಗೀತ ನಮನ

ಬೀದರ್, ಸೆ. 9 :
ಕರ್ನಾಟಕ ಸಾಹಿತ್ಯ ಸಂಘ (ರಿ).ಬೀದರ ಹಾಗೂ ಸಾಧನಾ ಯೂಥ್ ಫೌಂಡೇಶನ್ (ರಿ).ಬೀದರ ರವರ ಸಂಯುಕ್ತಾಶಯದಲ್ಲಿ ಸ್ವರ ಕೋಗಿಲೆ ಎಸ್. ಜಾನಕಿ ಅಮ್ಮನವರಿಗೆ ಗೀತೆ ನಮನ ಸಂಗೀತ ಕಾರ್ಯಕ್ರಮವನ್ನು ಜಿಲ್ಲೆಯ ಪ್ರಸಿದ್ಧ ಇಂಜಿನಿಯರ್ ಸ್ವರ್ಣ ಕನ್ಸ್ಟ್ರಕ್ಷನ ಮಾಲೀಕರಾದ ಶ್ರೀ ವೀರಶೆಟ್ಟಿ ಮಣಿಗೆ ರವರು ಚಾಲನೆ ಕೊಟ್ಟರು. ಕೃಷಿ ಸಮಾಜದ ಜಿಲ್ಲಾಧ್ಯಕ್ಷರಾದ ಶ್ರೀ ಸಿದ್ದರಾಮಯ್ಯ ಸ್ವಾಮಿ ಜಿಲ್ಲಾ ಬ್ರಾಹ್ಮಣ ಮಹಾ ಸಂಗದ ಅಧ್ಯಕ್ಷರಾದ ಶ್ರೀ ರಮೇಶ್ ಕುಲಕರ್ಣಿ ಉದ್ಯಮಿಗಳಾದ ಶ್ರೀ ಸಜಾನಂದ ಕಂದಗೂಳೆ ಯುವ ಉದ್ಯಮಿಗಳಾದ ಶ್ರೀ ಅಶೋಕ್ ಹೆಬ್ಬಾಳೆ ಗುತ್ತಿಗೆದಾರರಾದ ಶ್ರೀ ಮಹಾದೇವ ಹಿರೇಮಠ್ ನ್ಯಾಯವಾದಿಗಳಾದ

ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಾದ ಶ್ರೀ ಶರತ್ ಕುಮಾರ್ ಅಭಿಮಾನ ಶ್ರೀ ಶರಣಪ್ಪ ಪಾಟೀಲ್ ಡಾ ಜಗನ್ನಾಥ ಹೆಬ್ಬಾಳ ಸಂಗೀತ್ತಾಗರರಾದ ಶ್ರೀ ಗುರುದೇವ್ ಪತ್ರಕರ್ತರಾದ ಶ್ರೀ ಕರುಣ್ ಕುಮಾರ್ ಚಂದನ್ ಸಾಹಿತ್ಯ ಸಂಘದ ಕಾರ್ಯದರ್ಶಿಗಳಾದ ಶ್ರೀ ನಿಜಲಿಂಗಪ್ಪ ತಗಾರೆ ಶ್ರೀ ಪ್ರೇಮ್ ಅವಿನಾಶ್ ಸೇರಿದಂತೆ ಇತರರು ಉಪಸ್ಥಿತರಿದ್ದರು.
ಡಾ.ರಾಜಕುಮಾರ ಹೆಬ್ಬಾಳೆ ಕಾರ್ಯಕ್ರಮ ಸಂಯೋಜನೆ ಬಹಳ ಉತ್ತಮವಾಗಿ ಮಾಡಿದರು.

ಮೋದಿ ಜೊತೆ ಉಕ್ರೇನ್ ಯುದ್ಧದ ಸ್ಥಿತಿಗತಿ ಚರ್ಚಿಸಲಿರುವ ಪುಟಿನ್

ನವದೆಹಲಿ, ಸೆ. 9 :
ರಷ್ಯಾ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ಅವರು ಇದೇ ವಾರ ನವದೆಹಲಿಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿಯಾಗಿ ಉಕ್ರೇನ್ ಯುದ್ಧದ ಪ್ರಸ್ತುತ ಪರಿಸ್ಥಿತಿ ಕುರಿತು ವಿವರವಾದ ಮಾಹಿತಿ ನೀಡಲಿದ್ದಾರೆ. ಶುಕ್ರವಾರ ನಡೆಯಲಿರುವ ಮೋದಿ–ಪುಟಿನ್ ಮಾತುಕತೆಯಲ್ಲಿ ರಕ್ಷಣಾ, ಇಂಧನ, ತಂತ್ರಜ್ಞಾನ ಮತ್ತು ದ್ವಿಪಕ್ಷೀಯ ವ್ಯಾಪಾರ ಸಂಬಂಧಗಳ ಜೊತೆಗೆ ಉಕ್ರೇನ್ ಸಂಘರ್ಷವೂ ಪ್ರಮುಖ ವಿಷಯವಾಗಲಿದೆ.
ಕಳೆದ ವಾರ ಕಿರ್ಗಿಸ್ತಾನದ ಬಿಷ್ಕೆಕ್‌ನಲ್ಲಿ ನಡೆದ ಶಾಂಘೈ ಸಹಕಾರ ಸಂಘಟನೆ ಶೃಂಗಸಭೆಯ ಸಂದರ್ಭದಲ್ಲಿ ಮೋದಿ ಅವರು ಪುಟಿನ್ ಅವರನ್ನು ಭೇಟಿ ಮಾಡಿ, 'ಅಂತ್ಯವಿಲ್ಲದ ಯುದ್ಧದಿಂದ ಯುದ್ಧದ ಅಂತ್ಯದತ್ತ' ಸಾಗುವ ಅಗತ್ಯವಿದೆ ಎಂದು ಒತ್ತಿ ಹೇಳಿದ್ದರು. ಉಕ್ರೇನ್ ಸಂಘರ್ಷಕ್ಕೆ ಶಾಂತಿಯುತ ಪರಿಹಾರ ಕಂಡುಕೊಳ್ಳಲು ಭಾರತ ತನ್ನಿಂದ ಸಾಧ್ಯವಾದ ಎಲ್ಲ ನೆರವನ್ನು ನೀಡಲು ಸಿದ್ಧವಿದೆ ಎಂದು ವಿದೇಶಾಂಗ ಸಚಿವ ಎಸ್. ಜೈಶಂಕರ್ ಕೂಡ ಇತ್ತೀಚೆಗೆ ಹೇಳಿದ್ದಾರೆ.
ಭಾರತದ ಶಾಂತಿ ಪ್ರಯತ್ನಗಳನ್ನು ರಷ್ಯಾ ಸ್ವಾಗತಿಸಿದೆ. ಮಾತುಕತೆ ಮತ್ತು ರಾಜತಾಂತ್ರಿಕ ಮಾರ್ಗದ ಮೂಲಕ ಉಕ್ರೇನ್ ಸಂಘರ್ಷಕ್ಕೆ ಪರಿಹಾರ ಕಂಡುಕೊಳ್ಳುವ ಭಾರತದ ನಿಲುವು ರಷ್ಯಾದ ನಿಲುವಿಗೂ ಹೊಂದಿಕೆಯಾಗುತ್ತದೆ ಎಂದು ಕ್ರೆಮ್ಲಿನ್ ವಕ್ತಾರ ಡಿಮಿಟ್ರಿ ಪೆಸ್ಕೋವ ತಿಳಿಸಿದ್ದಾರೆ. ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಶಾಂತಿ ಪ್ರಯತ್ನಗಳನ್ನೂ ಮಾಸ್ಕೋ ಸ್ವಾಗತಿಸಿದೆ.
ಇತ್ತೀಚೆಗೆ ಅಮೆರಿಕದ ವಿಶೇಷ ಪ್ರತಿನಿಧಿಗಳಾದ ಸ್ಟೀವ್ ವಿಟ್‌ಕಾಫ್ ಮತ್ತು ಜಾರೆಡ್ ಕುಶ್ನರ್ ಅವರು ಮಾಸ್ಕೋದಲ್ಲಿ ಪುಟಿನ್ ಅವರನ್ನು ಭೇಟಿ ಮಾಡಿ ಉಕ್ರೇನ್ ಯುದ್ಧ ಅಂತ್ಯಗೊಳಿಸುವ ಕುರಿತು ಚರ್ಚಿಸಿದ್ದರು. ಮಾತುಕತೆ ಉಪಯುಕ್ತವಾಗಿದ್ದರೂ ಯಾವುದೇ ಮಹತ್ವದ ಒಪ್ಪಂದಕ್ಕೆ ಬರಲಾಗಿಲ್ಲ. ಸೆಪ್ಟೆಂಬರ್ 8ರಂದು ಪುಟಿನ್ ಮತ್ತು ಟ್ರಂಪ್ ಕೂಡ ದೂರವಾಣಿ ಮೂಲಕ ಮಾತುಕತೆ

ನಡೆಸಿದ್ದು, ಯುದ್ಧವನ್ನು ಶೀಘ್ರ ಅಂತ್ಯಗೊಳಿಸುವ ಕುರಿತು ಚರ್ಚಿಸಿದ್ದಾರೆ.
ಮೋದಿ–ಪುಟಿನ್ ಸಭೆಯಲ್ಲಿ ರಕ್ಷಣಾ ಸಹಕಾರಕ್ಕೂ ಹೆಚ್ಚಿನ ಆದ್ಯತೆ ಸಿಗುವ ನಿರೀಕ್ಷೆಯಿದೆ. ಬ್ರಹ್ಮೋಸ್ ಕ್ಷಿಪಣಿ ವ್ಯವಸ್ಥೆಯ ನವೀಕರಣ, ಎಸ್–400 ವಾಯು ರಕ್ಷಣಾ ವ್ಯವಸ್ಥೆಯ ಉಳಿದ ಪೂರೈಕೆ ಹಾಗೂ ರಷ್ಯಾದ ಎಸ್‌ಯು–57 ಐದನೇ ತಲೆಮಾರಿನ ಯುದ್ಧವಿಮಾನಗಳ ಸಂಭಾವ್ಯ ಖರೀದಿ ಕುರಿತು ಚರ್ಚೆಯಾಗುವ ಸಾಧ್ಯತೆಯಿದೆ.
ಇಂಧನ ಕ್ಷೇತ್ರದಲ್ಲೂ ಭಾರತ–ರಷ್ಯಾ ಸಹಕಾರ ಮುಂದುವರಿದಿದ್ದು, ರಷ್ಯಾದಿಂದ ಭಾರತದ ಕಚ್ಚಾ ತೈಲ ಆಮದು ಹಾಗೂ ಹೊಸ ಅಣು ವಿದ್ಯುತ್ ಯೋಜನೆಗಳ ಕುರಿತು ಮಾತುಕತೆ ನಡೆಯಲಿದೆ. ರಷ್ಯಾ ಸೇನೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಭಾರತೀಯರನ್ನು ಸ್ವದೇಶಕ್ಕೆ ಕರೆತರುವ ವಿಷಯವನ್ನೂ ಭಾರತ ಪ್ರಸ್ತಾಪಿಸುವ ಸಾಧ್ಯತೆಯಿದೆ.
ಮುಂದಿನ ದಿನಗಳಲ್ಲಿ ಉಕ್ರೇನ್ ಸಂಘರ್ಷಕ್ಕೆ ರಾಜತಾಂತ್ರಿಕ ಪರಿಹಾರ ಕಂಡುಕೊಳ್ಳುವ ಪ್ರಯತ್ನದಲ್ಲಿ ಭಾರತ ತನ್ನ ಪಾತ್ರವನ್ನು ಮತ್ತಷ್ಟು ವಿಸ್ತರಿಸುವ ಸಾಧ್ಯತೆ ಇದ್ದು, ಮೋದಿ–ಪುಟಿನ್ ಭೇಟಿಗೆ ಅಂತಾರಾಷ್ಟ್ರೀಯ ಮಟ್ಟದಲ್ಲಿ ಹೆಚ್ಚಿನ ಮಹತ್ವ ಬಂದಿದೆ.